## ಕರ್ನಾಟಕ ಸರ್ಕಾರ

ನಂ.ಗ್ರಾಅಪ/488/ಗ್ರಾಪಂಅ/2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 25-04-2017

### ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸುವ ತೆರಿಗೆ ಮೊತ್ತದ ಮೇಲೆ ವಿಧಿಸುವ ಉಪಕರಗಳ ಮೊತ್ತವನ್ನು ಸಂಬಂಧಿಸಿದ ಇಲಾಖೆಗಳಿಗೆ ಪಾವತಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 939 ಗ್ರಾಪಂಅ 2016 (ಭಾಗ-1) ದಿನಾಂಕ:19-11-2016.

***

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 204 ರಲ್ಲಿ ಸರ್ಕಾರವು ಸ್ಥಳೀಯ ಉಪಕರ ಮುಂತಾದವುಗಳನ್ನು ವಿಧಿಸಲು ಅವಕಾಶವಿದೆ. ಅದರಂತೆ ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸುವ ತೆರಿಗೆ ಮೊತ್ತದ ಮೇಲೆ ಈ ಕೆಳಕಂಡ 4 ಉಪಕರಗಳನ್ನು (Cess) ವಿಧಿಸಲು ಅವಕಾಶ ಕಲ್ಪಿಸಿದೆ.

| | | |
|---|---|---|
| 1) ಶಿಕ್ಷಣ ಉಪಕರ | - | ಶೇ. 10 |
| 2) ಆರೋಗ್ಯ ಉಪಕರ | - | ಶೇ. 15 |
| 3) ಗ್ರಂಥಾಲಯ ಉಪಕರ | - | ಶೇ. 06 |
| 4) ಭಿಕ್ಷುಕರ ಕರ | - | ಶೇ. 03 |
| **ಒಟ್ಟು** | | **ಶೇ. 34** |

ಮೇಲ್ಕಂಡಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸುವ ತೆರಿಗೆ ಮೊತ್ತದ ಮೇಲೆ ಉಪಕರಗಳನ್ನು ತಪ್ಪದೆ ವಸೂಲಿ ಮಾಡಿ ಸಂಬಂಧಿಸಿದ ಇಲಾಖೆಗಳಿಗೆ ಪಾವತಿಸಲು ಕ್ರಮ ವಹಿಸುವಂತೆ ದಿನಾಂಕ:19-11-2016 ರ ಸರ್ಕಾರದ ಸುತ್ತೋಲೆಯಲ್ಲಿ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದೆ.

ದಿನಾಂಕ: 31-03-2014 ಕ್ಕೆ ಅಂತ್ಯಗೊಂಡ ಸಿ & ಎಜಿ ರವರ ವರದಿಯಂತೆ ಗ್ರಾಮ ಪಂಚಾಯಿತಿಗಳು ಈ ರೀತಿ ಉಪಕರಗಳ ಮೊತ್ತವನ್ನು ಸಂಬಂಧಿಸಿದ ಇಲಾಖೆಗಳಿಗೆ ವರ್ಗಾಯಿಸದೆ ಬಳಸಿಕೊಂಡಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ಸಂಬಂಧಿಸಿದ ಗ್ರಾಮ ಪಂಚಾಯಿತಿಗಳ ಮೇಲೆ ಕ್ರಮ ಕೈಗೊಳ್ಳಲು ಸರ್ಕಾರವು ಉದ್ದೇಶಿಸಿದೆ. ದಿನಾಂಕ: 31-03-2014 ಕ್ಕೆ ಅಂತ್ಯಗೊಂಡ ಸಿ & ಎಜಿ ರವರ ಸ್ಥಳೀಯ ಸಂಸ್ಥೆಗಳ ವರದಿಯಲ್ಲಿನ ಕಂಡಿಕೆ 2.3 ರಲ್ಲಿ ಪರೀಕ್ಷಾ-ಪರಿಶೀಲನೆ ಮಾಡಲಾದ 40 ಗ್ರಾಮ ಪಂಚಾಯತಿಗಳು 2009-14ನೇ ಅವಧಿಯಲ್ಲಿನ ಉಪಕರದ ಮೊತ್ತವನ್ನು ಸಂಬಂಧಿತ ಇಲಾಖೆಗಳಿಗೆ ಜಮಾ ಮಾಡಲು ಕೂಡಲೇ ಕ್ರಮ ವಹಿಸುವಂತೆ ತಿಳಿಸಿದೆ.

ದಿನಾಂಕ:25-04-2017 ರಂದು ನಡೆದ ಕರ್ನಾಟಕ ವಿಧಾನ ಪರಿಷತ್ತಿನ ಭರವಸೆಗಳ ಸಮಿತಿಯು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಭರವಸೆ ಸಂಖ್ಯೆ:4788/2015 ರ ಬಗ್ಗೆ ನಡೆದ ತೀರ್ಮಾನದಂತೆ ರಾಜ್ಯದ ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸುವ ತೆರಿಗೆ ಮೊತ್ತದ ಮೇಲಿನ ಗ್ರಂಥಾಲಯ ಉಪಕರವನ್ನು ಗ್ರಂಥಾಲಯ ಇಲಾಖೆಗೆ ಸಕಾಲದಲ್ಲಿ ಪಾವತಿಸದಿರುವ ಬಗ್ಗೆ ತೀವ್ರ ಅಸಮಾಧಾನವನ್ನು ವ್ಯಕ್ತಪಡಿಸಿ ಬಾಕಿ ಇರುವ ಗ್ರಂಥಾಲಯ ಉಪಕರವನ್ನು ದಿನಾಂಕ:31-03-2018 ರೊಳಗೆ ಗ್ರಂಥಾಲಯ ಇಲಾಖೆಗೆ ಕಡ್ಡಾಯವಾಗಿ ಪಾವತಿಸಲು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನವನ್ನು ನೀಡುವಂತೆ ಭರವಸೆ ಸಮಿತಿಯು ತಿಳಿಸಿದೆ.

ರಾಜ್ಯದ ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸುವ ತೆರಿಗೆ ಮೊತ್ತದ ಮೇಲಿನ ಬಾಕಿ ಇರುವ ಉಪಕರಗಳನ್ನು ದಿನಾಂಕ:31-03-2018 ರೊಳಗೆ ಸಂಬಂಧಿಸಿದ ಇಲಾಖೆಗಳಿಗೆ ಕಡ್ಡಾಯವಾಗಿ ಪಾವತಿಸಲು ಹಾಗೂ ಪಾವತಿಸದಿರಲು ಕಾರಣರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಕರ್ನಾಟಕ ಸಿವಿಲ್ ಸೇವಾ (ಸಿಸಿಎ) ನಿಯಮಗಳು, 1957 ರನ್ವಯ ಶಿಸ್ತು ಕ್ರಮ ಜರುಗಿಸಲಾಗುವುದು. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸುವ ತೆರಿಗೆ ಮೊತ್ತದ ಮೇಲೆ ಉಪಕರಗಳನ್ನು ತಪ್ಪದೆ ವಸೂಲಿ ಮಾಡಿ ಸಂಬಂಧಿಸಿದ ಇಲಾಖೆಗಳಿಗೆ ಪಾವತಿಸಲು ಕ್ರಮ ವಹಿಸುವಂತೆ ಮತ್ತೊಮ್ಮೆ ತಿಳಿಸಿದೆ.

ಮೇಲ್ಕಂಡಂತೆ, ಗ್ರಾಮ ಪಂಚಾಯತಿಗಳು ಉಪಕರಗಳ ಮೊತ್ತವನ್ನು ಪಾವತಿಸುತ್ತಿರುವ ಬಗ್ಗೆ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ರವರು ತ್ರೈಮಾಸಿಕವಾಗಿ ಪ್ರಗತಿ ಪರಿಶೀಲನೆ ಮಾಡಿ ಉಪಕರಗಳನ್ನು ಪಾವತಿಸದವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸಹ ತಿಳಿಸಿದೆ. ಈ ವಿಷಯದಲ್ಲಿ ಯಾವುದೇ ಲೋಪ ಕಂಡು ಬಂದ ಪಕ್ಷದಲ್ಲಿ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ (ಅಭಿವೃದ್ಧಿ) ರವರನ್ನು ವೈಯಕ್ತಿಕ ಜವಾಬ್ದಾರರನ್ನಾಗಿ ಮಾಡಲಾಗುವುದೆಂದೂ ಸಹ ತಿಳಿಸಲಾಗಿದೆ. ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಜವಾಬ್ದಾರಿಗಳನ್ನಾಗಿ ಮಾಡಿ ಅವರ ವಿರುದ್ಧ ಶಿಸ್ತಿನ ಕ್ರಮ ತೆಗೆದುಕೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಹ ತಿಳಿಸಿದೆ.

ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪಕಾರ್ಯದರ್ಶಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದೆ.

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತಿಗಳು.
3) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
4) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ,
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.